ಕರ್ನಾಟಕ ಸರ್ಕಾರ

ನಂ.ಡಿವೈಇಎಸ್/ಕ್ರೀಚಮ್ರೋ/51/2018–19

ಆಯುಕ್ತರ ಕಚೇರಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು–01, ದಿನಾಂಕ: 13–07–2018

ಸುತ್ತೋಲೆ

ವಿಷಯ:–2018–19ನೇ ಸಾಲಿನಲ್ಲಿ ಮುಂಬರುವ ವರ್ಷಗಳಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಗಣನೀಯ ಸಾಧನೆ ದಾಖಲಿಸುವ ಸಾಧ್ಯತೆ ಇರುವ ಕ್ರೀಡಾಪಟುಗಳಿಂದ ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರೆಕ್ಸ್‌ಲೆನ್ಸ್ ಯೋಜನೆಗೆ ಅಡಿ ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ:– ಸರ್ಕಾರದ ಆದೇಶ ಸಂ:ಯುಸೇಇ/181/ಯು.ಸೇ.ಕ್ರೀ/2017
ದಿನಾಂಕ: 04–07–2017.

****

2018–19ನೇ ಸಾಲಿನಲ್ಲಿ ಮುಂಬರುವ ವರ್ಷಗಳಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಗಣನೀಯ ಸಾಧನೆ ದಾಖಲಿಸುವ ಸಾಧ್ಯತೆ ಇರುವ ಕ್ರೀಡಾಪಟುಗಳಿಂದ ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರೆಕ್ಸ್‌ಲೆನ್ಸ್ ಯೋಜನೆ ಅಡಿಯಲ್ಲಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಉಲ್ಲೇಖಿತ ಸರ್ಕಾರದ ಪರಿಷ್ಕೃತ ಮಾರ್ಗಸೂಚಿ ಮತ್ತು ಅರ್ಜಿ ನಮೂನೆಗಳನ್ನು ಲಗತ್ತಿಸಿದೆ. ಈ ಬಗ್ಗೆ ಸ್ಥಳೀಯ ಮತ್ತು ವ್ಯಾಪಕ ಪ್ರಚಾರವಿರುವ ದಿನಪತ್ರಿಕೆಗಳಲ್ಲಿ ಪ್ರಚಾರ ನೀಡುವ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:31–08–2018 ರೊಳಗಾಗಿ ಈ ಕಛೇರಿಗೆ ಸಲ್ಲಿಸತಕ್ಕದ್ದು, ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲವೆಂದು ತಿಳಿಸಿದೆ.

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಗೆ

1. ಜಿಲ್ಲೆಯ ಎಲ್ಲಾ ಸಹಾಯಕ ನಿರ್ದೇಶಕರು/ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ. ಇವರುಗಳ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
3. ಹೆಚ್ಚುವರಿ ಪ್ರತಿ.

Received 24/7/18

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸ್‌ಲೆನ್ಸ್ ಕಾರ್ಯಕ್ರಮದ ಮಾರ್ಗಸೂಚಿಯನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಯುಸೇಇ 323 ಯುಸೇಕ್ರೀ 2015, ದಿನಾಂಕ:01.10.2015

2. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ:ಡಿವೈಇಎಸ್/ಎಸ್.ಎ.ಇ/02/2017-18 ದಿನಾಂಕ:17.05.2017.

******

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಮುಂಬರುವ ವರ್ಷಗಳಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಗಣನೀಯ ಸಾಧನೆ ದಾಖಲಿಸುವ ಸಾಧ್ಯತೆ ಇರುವ ಪ್ರತಿಭಾನ್ವಿತ ಕ್ರೀಡಾ ಪಟುಗಳಿಗೆ ಆಹಾರ, ಪ್ರಯಾಣ ವೆಚ್ಚ, ಕ್ರೀಡಾ ಕಿಟ್ ಮತ್ತು ಉನ್ನತ ಕ್ರೀಡಾ ತರಬೇತಿಗಾಗಿ ಸಹಾಯಧನ ನೀಡುವ ಉದ್ದೇಶದಿಂದ 'ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸ್‌ಲೆನ್ಸ್' ಕಾರ್ಯಕ್ರಮದಡಿ ಮಾರ್ಗಸೂಚಿ ರೂಪಿಸಲಾಗಿರುತ್ತದೆ. ಮೇಲೆ ಓದಲಾದ (2)ರ ದಿನಾಂಕ:17.05.2017ರ ಪತ್ರದಲ್ಲಿ ಪ್ರಸ್ತುತ ಸದರಿ ಉದ್ದೇಶಕ್ಕಾಗಿ 2017-18ನೇ ಸಾಲಿನ ಆಯವ್ಯಯದಲ್ಲಿ ರೂ.2.00 ಕೋಟಿಗಳನ್ನು ಒದಗಿಸಲಾಗಿರುತ್ತದೆ; ಸದರಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಈ ಹಿಂದೆ ಹೊರಡಿಸಿದ ಮಾರ್ಗಸೂಚಿಗಳಿಗೆ ಕೆಲವೊಂದು ಬದಲಾವಣೆಗಳನ್ನು ಮಾಡುವುದು ಅವಶ್ಯಕವಾಗಿರುತ್ತದೆ; ಆದ್ದರಿಂದ 'ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸ್‌ಲೆನ್ಸ್' ಕಾರ್ಯಕ್ರಮದಡಿ ಹೊರಡಿಸಲಾದ ಮಾರ್ಗಸೂಚಿಯನ್ನು ಈ ಕೆಳಕಂಡ ಬದಲಾವಣೆಗಳೊಂದಿಗೆ ಪರಿಷ್ಕರಿಸಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಸರ್ಕಾರವನ್ನು ಕೋರಿರುತ್ತಾರೆ.

1. ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ಕ್ರೀಡಾಪಟುಗಳ ವಯೋಮಿತಿಯನ್ನು ಗರಿಷ್ಠ 25 ವರ್ಷಕ್ಕೆ ಮಿತಿಗೊಳಿಸುವುದು.
2. ಕ್ರೀಡಾಪಟುಗಳ ಆಯ್ಕೆಯಲ್ಲಿ ಒಲಂಪಿಕ್ಸ್ ಕ್ರೀಡೆಗಳಿಗೆ ಕನಿಷ್ಠ 75%, ಏಷ್ಯನ್/ಕಾಮನ್‌ವೆಲ್ತ್ ಕ್ರೀಡೆಗಳಿಗೆ ಗರಿಷ್ಠ 20% ಹಾಗೂ ಇತರೆ ರಾಷ್ಟ್ರೀಯ/ಅಂತರ ರಾಷ್ಟ್ರೀಯ ಮಟ್ಟದ ಕ್ರೀಡೆಗಳಿಗೆ ಗರಿಷ್ಠ 5% ರಷ್ಟು ಮೀಸಲಾತಿಯನ್ನು ಕಲ್ಪಿಸುವುದು.
3. ಕ್ರೀಡಾಪಟುಗಳ ಆಯ್ಕೆಯಲ್ಲಿ ವಿವಿಧ ಕ್ರೀಡಾ ವಿಭಾಗಗಳಲ್ಲಿ ವೈಯಕ್ತಿಕ ಕ್ರೀಡೆಗಳ ಕ್ರೀಡಾಪಟುಗಳಿಗೆ ಕನಿಷ್ಠ 65% ರಷ್ಟು ಹಾಗೂ ಗುಂಪು ಕ್ರೀಡೆಗಳ ಕ್ರೀಡಾಪಟುಗಳಿಗೆ ಗರಿಷ್ಠ 35% ರಂತೆ ಮೀಸಲಾತಿ ಕಲ್ಪಿಸುವುದು.

ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 181 ಯುಸೇಕ್ರೀ 2017

ಬೆಂಗಳೂರು, ದಿನಾಂಕ: 04.07.2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 'ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸ್‌ಲೆನ್ಸ್' ಕಾರ್ಯಕ್ರಮದ ಮಾರ್ಗಸೂಚಿಯಲ್ಲಿ ಈ ಕೆಳಕಂಡ ಅಂಶಗಳನ್ನು ಸೇರಿಸಿ ಪರಿಷ್ಕರಿಸಿ ಆದೇಶಿಸಿದೆ.

1. ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ಕ್ರೀಡಾಪಟುಗಳ ವಯೋಮಿತಿಯನ್ನು ಗರಿಷ್ಠ 25 ವರ್ಷಕ್ಕೆ ಮಿತಿಗೊಳಿಸಲಾಗಿದೆ.

2. ಕ್ರೀಡಾಪಟುಗಳ ಆಯ್ಕೆಯಲ್ಲಿ ಒಲಂಪಿಕ್ ಕ್ರೀಡೆಗಳಿಗೆ ಕನಿಷ್ಠ 75%, ಏಷ್ಯನ್/ಕಾಮನ್‌ವೆಲ್ತ್ ಕ್ರೀಡೆಗಳಿಗೆ ಗರಿಷ್ಠ 20% ಹಾಗೂ ಇತರೆ ರಾಷ್ಟ್ರೀಯ/ಅಂತರರಾಷ್ಟ್ರೀಯ ಮಟ್ಟದ ಕ್ರೀಡೆಗಳಿಗೆ ಗರಿಷ್ಠ 5% ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿದೆ.

3. ಕ್ರೀಡಾಪಟುಗಳ ಆಯ್ಕೆಯಲ್ಲಿ ವಿವಿಧ ಕ್ರೀಡಾ ವಿಭಾಗಗಳಲ್ಲಿ ವೈಯಕ್ತಿಕ ಕ್ರೀಡೆಗಳ ಕ್ರೀಡಾಪಟುಗಳಿಗೆ ಕನಿಷ್ಠ 65% ರಷ್ಟು ಹಾಗೂ ಗುಂಪು ಕ್ರೀಡೆಗಳ ಕ್ರೀಡಾಪಟುಗಳಿಗೆ ಗರಿಷ್ಠ 35% ರಂತೆ ಮೀಸಲಾತಿ ಕಲ್ಪಿಸಲಾಗಿದೆ.

Players selection

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಪ್ರಭುಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಎ & ಇ), ಕರ್ನಾಟಕ, ಅಂಚೆ ಪೆಟ್ಟಿಗೆ ಸಂಖ್ಯೆ-5329, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಜಿ&ಎಸ್.ಎಸ್.ಎ), ಕರ್ನಾಟಕ, ಅಂಚೆ ಪೆಟ್ಟಿಗೆ ಸಂಖ್ಯೆ-5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಇ&ಆರ್.ಎಸ್.ಎ), ಕರ್ನಾಟಕ, ಅಂಚೆ ಪೆಟ್ಟಿಗೆ ಸಂಖ್ಯೆ-5398, ಬೆಂಗಳೂರು.
4. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಮಾನ್ಯ ಮೀನುಗಾರಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಅನುಬಂಧ-2

ಕ್ರೀಡಾ ಉತ್ಕೃಷ್ಟತಾ ಕೇಂದ್ರ (Sports Academy for Excellence) ಅಡಿ ಉನ್ನತ ಕ್ರೀಡಾ ಪರಿಣತಿಗೆ ಧನಸಹಾಯ ಯೋಜನೆ

		ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ
1	ಕ್ರೀಡಾಪಟುವಿನ ಹೆಸರು	
2	ತಂದೆಯ ಹೆಸರು	
3	ಪುರುಷ / ಮಹಿಳೆ	
4	ಪರಿಶಿಷ್ಟ ಜಾತಿ ಅಥವಾ ಪಂಗಡಕ್ಕೆ ಸೇರಿದ್ದರೆ ಸಕ್ಷಮ ಪ್ರಾಧಿಕಾರದಿಂದ ಪಡೆದ ದೃಢೀಕರಣ ಪತ್ರ ಒದಗಿಸುವುದು	
5	ಹುಟ್ಟಿದ ದಿನಾಂಕ	
6	ಸಾಧನೆ ಮಾಡಿದ ಕ್ರೀಡೆಯ ಹೆಸರು	
7	ವಿಳಾಸ (ಅ) ಖಾಯಂ ವಿಳಾಸ	
	(ಆ) ಪ್ರಸ್ತುತ ವಿಳಾಸ	
8	ದೂರವಾಣಿ ಸಂಖ್ಯೆ: (ಅ) ಮೊಬೈಲ್	
	(ಆ) ಸ್ಥಿರ ದೂರವಾಣಿ	
9	ಉದ್ಯೋಗಸ್ಥರಾಗಿದ್ದರೆ ಉದ್ಯೋಗದ ಹೆಸರು ಮತ್ತು ವಿಳಾಸ	
	ವಿದ್ಯಾರ್ಥಿಯಾಗಿದ್ದಲ್ಲಿ ಕಾಲೇಜಿನ ಪೂರ್ಣ ವಿಳಾಸ	
10	ವಿದ್ಯಾರ್ಹತೆ	
11	ವಾರ್ಷಿಕ ಆದಾಯ (ಪ್ರಮಾಣ ಪತ್ರ ಲಗತ್ತಿಸುವುದು)	
12	ಕ್ರೀಡಾ ಸಾಧನೆ ವಿವರ (ಹೆಚ್ಚಿನ ಸ್ಥಳಾವಕಾಶ ಅವಶ್ಯಕತೆಯಿದ್ದಲ್ಲಿ ಪ್ರತ್ಯೇಕ ಹಾಳೆಯಲ್ಲಿ ಬರೆದು ಲಗತ್ತಿಸುವುದು)	1 2 3

ಅನುಬಂಧ-1

1) ಅಥ್ಲೆಟಿಕ್ಸ್ 0

2) ಅರ್ಚರಿ 0

3) ಬ್ಯಾಡ್ಮಿಂಟನ್ 0

4) ಬಿಲಿಯರ್ಡ್ಸ್ / ಸ್ನೂಕರ್ NO

5) ಬಾಸ್ಕೆಟ್‌ಬಾಲ್ 0

6) ಸ್ಕೇಟ್ಲಿಂಗ್ 0

7) ಫುಟ್ಬಾಲ್ 0

8) ಹಾಕಿ 0

9) ಜೂಡೋ 0

10) ಶೂಟಿಂಗ್ 0

11) ಟೆನ್ನಿಸ್ 0

12) ಬಾಕ್ಸಿಂಗ್ 0

13) ಕುಸ್ತಿ 0

14) ಈಜು 0

15) ವಾಲಿಬಾಲ್ 0

16) ಚೆಸ್ NO

17) ಕಬಡ್ಡಿ NO

18) ಟೇಬಲ್ ಟೆನ್ನಿಸ್ 0

19) ಜಲ ಕ್ರೀಡೆಗಳು (ರೋಯಿಂಗ್, ಸೈಲಿಂಗ್, ಕಯಾಕಿಂಗ್) 0

(ಆರ್. ಪ್ರಭುಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ.
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.